**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ : 2009-10ರ ಸಾಲಿನಲ್ಲಿ ತಾಲ್ಲೂಕು ಮಟ್ಟದ ಕಾರ್ಯಪಡೆಯಡಿ ತುರ್ತು ಕುಡಿಯುವ ನೀರಿನ ಕಾಮಗಾರಿಗಳ ಅನುಷ್ಠಾನ ಸಲುವಾಗಿ ರಾಜ್ಯ ವಲಯದ NRWSP/MNPಯಡಿ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: ಸರ್ಕಾರದ ಆದೇಶ ಸಂ:ಗ್ರಾಅಪ 128 ಗ್ರಾನೀಸ(4) 08 ದಿ:25.11.08

**ಪೀಠಿಕೆ:**

2009-10ರ ಆಯವ್ಯಯ ಭಾಷಣದಲ್ಲಿ ತಾಲ್ಲೂಕು ಮಟ್ಟದ ಕಾರ್ಯಪಡೆ ಮುಖೇನ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಸಲುವಾಗಿ ರೂ.35 ಕೋಟಿ ಅನುದಾನ ಒದಗಿಸುವುದಾಗಿ ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿದ್ದಾರೆ. ಈಗಾಗಲೇ 2008-09ನೇ ಸಾಲಿನಿಂದ ತಾಲ್ಲೂಕುವಾರು ರಚಿಸಿರುವ ಕಾರ್ಯಪಡೆ ಮುಖೇನ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಉಲ್ಲೇಖಿತ ದಿ:25.11.2008ರ ಆದೇಶದಲ್ಲಿ ರಚಿಸಲಾಗಿರುವ ತಾಲ್ಲೂಕು ಮಟ್ಟದ ಕಾರ್ಯಪಡೆ ಮುಖೇನ ಕೆಲವು ಕಾಮಗಾರಿಗಳನ್ನು ಅನುಮೋದಿಸಿ ಅನುಷ್ಠಾನಗೊಳಿಸಲಾಗಿದೆ. ಇನ್ನೂ ಕೆಲವು ಕಾಮಗಾರಿಗಳನ್ನು ಸ್ಥಳೀಯ ಅವಶ್ಯಕತೆಗನುಸಾರವಾಗಿ ಪ್ರಸಕ್ತ ಸಾಲಿನಲ್ಲಿ ಅನುಷ್ಠಾನಗೊಳಿಸಬೇಕಾದ ಅವಶ್ಯಕತೆಯಿದೆ. ಅಂತೆಯೇ ಪ್ರಸಕ್ತ ಸಾಲಿಗೆ MNP ಸಾಮಾನ್ಯ ಗ್ರಾಮೀಣ ನೀರು ಸರಬರಾಜು ಬಾಬ್ತಿಗಾಗಿ ಲಭ್ಯವಿರುವ ಅನುದಾನದ ಪೈಕಿ ರೂ.35 ಕೋಟಿಗಳನ್ನು ಗ್ರಾಮೀಣ ಪ್ರದೇಶಗಳನ್ನೊಳಗೊಂಡಿರುವ ತಾಲ್ಲೂಕುಗಳಲ್ಲಿ ವಿನಿಯೋಗಿಸಲನುವಾಗುವಂತೆ ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 128 ಗ್ರಾನೀಸ (4) 08, ಬೆಂಗಳೂರು, ದಿನಾಂಕ:25.04.2009**

ಪೀಠಿಕೆಯಲ್ಲಿನ ಅಂಶಗಳನ್ನು ಪರಿಶೀಲಿಸಿ ತಾಲ್ಲೂಕು ಮಟ್ಟದ ಕಾರ್ಯಪಡೆಗಳ ಮುಖೇನ ಅನುಷ್ಠಾನಗೊಳಿಸುವ ಅನುಮೋದಿತ ತುರ್ತು ಕುಡಿಯುವ ನೀರಿನ ಕಾಮಗಾರಿಗಳ ಬಿಲ್ ಪಾವತಿಸಲು **ರೂ.35.20 ಕೋಟಿಗಳನ್ನು** (ಮೂವತ್ತೈದು ಕೋಟಿ ಇಪ್ಪತ್ತು ಲಕ್ಷ ರೂಪಾಯಿಗಳು ಮಾತ್ರ) ಈ ಆದೇಶಕ್ಕೆ ಲಗತ್ತಿಸಿರುವ **ಅನುಬಂಧ-1ರಲ್ಲಿ** ಹೇಳಿರುವಂತೆ ರಾಜ್ಯದ ಎಲ್ಲಾ 29 ಜಿಲ್ಲಾ ಪಂಚಾಯತ್‌ಗಳಿಗೆ ರಾಜ್ಯ ವಲಯದ NRWSP (MNP)ಯಡಿ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳು ಈ ಆದೇಶದಲ್ಲಿ ಬಿಡುಗಡೆಯಾಗಿರುವ ಅನುದಾನವನ್ನು ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ/7/ಜೆಡ್‌ಪಿಎ/03 ದಿನಾಂಕ:14.7.2005ರನ್ವಯ ಖಜಾನೆಯಿಂದ ಪಡೆದು ಉದ್ದೇಶಿತ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನ ಸಲುವಾಗಿ ಮಾತ್ರ ಆಯಾ ಯೋಜನಾ ಮಾರ್ಗದರ್ಶಿಗಳನ್ವಯ ವೆಚ್ಚ ಭರಿಸತಕ್ಕದ್ದು. ಇತರೆ ಉದ್ದೇಶಗಳಿಗಾಗಿ ಮಾರ್ಗಪಲ್ಲಟ ಮಾಡತಕ್ಕದ್ದಲ್ಲ.

3. ಈ ಅನುದಾನವನ್ನು Task Force ಸಮಿತಿಯಿಂದ ಅನುಮೋದಿಸಲ್ಪಟ್ಟು ಸಾರ್ವಜನಿಕ ಹಿತದೃಷ್ಟಿಯಿಂದ ನಿಯಮಾನುಸಾರ ತೃಪ್ತಿಕರವಾಗಿ ಅನುಷ್ಠಾನಗೊಳಿಸಿರುವ ಕಾಮಗಾರಿಗಳು / ಅನುಷ್ಠಾನಗೊಳಿಸುವ ಕಾಮಗಾರಿಗಳ ಸಲುವಾಗಿ ಮಾತ್ರ ವಿನಿಯೋಗಿಸತಕ್ಕದ್ದು. ತಾಲ್ಲೂಕುವಾರು ಅನುದಾನ ಹಂಚಿಕೆಯನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪಟ್ಟಣ / ನಗರ ಪ್ರದೇಶಗಳನ್ನು ಹೊರತುಪಡಿಸಿದ ತಾಲ್ಲೂಕುಗಳಲ್ಲಿನ ಗ್ರಾಮೀಣ ಜನವಸತಿಗಳಿಗೆ ಸ್ಥಳೀಯ ವಾಸ್ತವಿಕ ಅಗತ್ಯತೆ ಆಧರಿಸಿ ಪ್ರತಿ ತಾಲ್ಲೂಕಿಗೆ ರೂ.20 ಲಕ್ಷದವರೆಗೆ ಅನುದಾನ ಬಿಡುಗಡೆ ಮಾಡಲು ಕ್ರಮವಹಿಸತಕ್ಕದ್ದು.

4. ಪ್ರಗತಿ ವರದಿಯನ್ನು ಹಾಗೂ ಹಣ ಬಳಕೆ ಪ್ರಮಾಣ ಪತ್ರವನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-20 ಇವರಿಗೆ ಹಾಗೂ ಸರ್ಕಾರಕ್ಕೆ ಸಲ್ಲಿಸುವುದು.

5. ಜಿಲ್ಲಾ ಪಂಚಾಯತ್‌ಗಳು ಈ ವೆಚ್ಚವನ್ನು ಲೆಕ್ಕಶೀರ್ಷಿಕೆ 4215-ನೀರು ಸರಬರಾಜು ಮತ್ತು ನೈರ್ಮಲ್ಯ ಮೇಲಣ ವೆಚ್ಚ-01-ನೀರು ಸರಬರಾಜು-102-ಗ್ರಾಮೀಣ ನೀರು ಸರಬರಾಜು-9-ಟೆಸ್ಟ್-01-ಟೆಸ್ಟ್ ಗ್ರಾಮೀಣ ನೀರು ಸರಬರಾಜು-059-ಬಂಡವಾಳ ವೆಚ್ಚಗಳು (ಯೋಜನೆ) 2009-10ರಡಿ ಭರಿಸತಕ್ಕದ್ದು. (4215-01-102-9-01-059)

6. ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ 72 ವೆಚ್ಚ-6/2009 ದಿ:7/19.3.2009 ರಲ್ಲಿನ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

( ಪಿ.ಎ.ಮೇಘಣ್ಣವರ )
ನಿರ್ದೇಶಕರು (ಗ್ರಾಮೂಸೌ) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು :

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಚೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ
9. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ,ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಸಂಕೀರ್ಣ,ಅಭಯ ಸಂಕೀರ್ಣ,4ನೇ ಮಹಡಿ,ನಂ.55,ರೆಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-20.
12. ಎಲ್ಲಾ (29) ಜಿಲ್ಲಾಪಂಚಾಯತ್‌ಗಳ ಅಧ್ಯಕ್ಷರು.
13. ಎಲ್ಲಾ(29) ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು.
14. ಎಲ್ಲಾ (8) ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಅಭಿಯಂತರುಗಳು.
15. ಎಲ್ಲಾ (38) ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್‌ಗಳು
16. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, ಆನಂದರಾವ್ ವೃತ್ತ ,ಬೆಂಗಳೂರು-10.
17. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ ಇಲಾಖೆ, ಬೆಂಗಳೂರು
18. ಉಪನಿರ್ದೇಶಕರು, ನೆಟ್‌ವರ್ಕ್‌ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂ.
19. ಎಲ್ಲಾ ಜಿಲ್ಲೆಯ ಜಿಲ್ಲಾ ಖಜಾನಾಧಿಕಾರಿಗಳು.
20. ಸಹ ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
21. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್) ಇವರುಗಳ ಆಪ್ತ ಕಾರ್ಯದರ್ಶಿ/ನಿರ್ದೇಶಕರು, KRWSSA ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ/ ನಿರ್ದೇಶಕರು (ಗ್ರಾಮೂಸೌ) E/o ಸರ್ಕಾರದ ಜಂಟಿ ಕಾರ್ಯದರ್ಶಿ/ನಿರ್ದೇಶಕರು (ಗ್ರಾಮ ಸ್ವರಾಜ್)/ಆಂತರಿಕ ಆರ್ಥಿಕ ಸಲಹೆಗಾರರು, ಇವರುಗಳ ಆಪ್ತ ಸಹಾಯಕರು.
22. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅ ಪಂ.ರಾಜ್ ಇಲಾಖೆ, ಬೆಂಗಳೂರು.
23. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು)
24. ಗ್ರಾ.ಅ.ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ - 10 ಪ್ರತಿಗಳು.
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ) 26. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.